**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/20/ಗ್ರಾಪಂಕಾ/2016 ದಿನಾಂಕ: 01-02-2016
2. ಅಪರ ನಿಭಂಧಕರು ವಿಚಾರಣೆಗಳು-10 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE/41/2016/ARE-10, Dt:31-01-2017
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/41/2016/ARE-10, Dt:02-02-2017
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/20/ಗ್ರಾಪಂಕಾ/2016 ದಿನಾಂಕ: 05-05-2017.
5. ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"The Charges leveled against DGOs 1 & 2 were that, while they were working as the then Secretaries of T.Doddapura Gram Panchayath, T. Narasipura Taluk, Mysuru District, they sanctioned house in favour of one S.Rajaprabhu in 1998-99 and again during 2005-06, allotted another house in favour of his wife, Smt. Chandramma. Further, had sanctioned a house to one Puttaswamy during 1999-2000, again during 2005-06, sanctioned another house in favour of his wife, Smt Mahadevamma by violating the scheme under Indira Aawaaz Yojana and also, the guildelines. Thereby, both DGO's 1 & 2 failed to maintain absolute integrity, devotion to duty and rendered themselves as unbecoming of Government Servants and committed misconduct within the meaning of Rule 3(1) (i) to (iii) of the KCS (Conduct) Rules, 1966. ಎಂದು ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಐದು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಹಿಡಿಯುವಂತೆ"** ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ಅನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಪತ್ರದ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ

ಶ್ರೀ ಎಂ.ಬಸವಯ್ಯ ಹಿಂದಿನ ಕಾರ್ಯದರ್ಶಿ, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರು ತಮ್ಮ ಲಿಖಿತ ಹೇಳಿಕೆಯಲ್ಲಿ ದಿನಾಂಕ: 13.11.2007 ಮತ್ತು ದಿನಾಂಕ:21.12.2009 ರ ಶ್ರೀ. ಶಿವಶಂಕರ್ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ ರವರು ತಮ್ಮ ವರದಿಯಲ್ಲಿ ಯಾವುದೇ ಗುರುತರವಾದ ಅಪರಾದ ಕಂಡು ಬಂದಿರುವುದಿಲ್ಲವೆಂದು ತಿಳಿಸಿರುತ್ತಾರೆ. ಆದ್ದರಿಂದ ನನ್ನನ್ನು ದೋಷಮುಕ್ತನನ್ನಾಗಿಸಬೇಕೆಂದು ಕೋರಿರುತ್ತಾರೆ.

ಶ್ರೀ ಹೆಚ್.ಬಿ.ನಾಗರಾಜು, ಹಿಂದಿನ ಕಾರ್ಯದರ್ಶಿ, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸಿಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರು ತಮ್ಮ ಲಿಖಿತ ಹೇಳಿಕೆಯಲ್ಲಿ ಗ್ರಾಮ ಸಭೆಯ ನಡವಳಿ, ಗ್ರಾಮಸ್ಥರ ಹೇಳಿಕೆ, ಎಲ್ಲವನ್ನು ಸಲ್ಲಿಸುತ್ತಾ, ದಂಡನಾ ರೂಪವನ್ನು ಕೈಬಿಟ್ಟು, ಕರ್ನಾಟಕ ಪಂಚಾಯತ್ ರಾಜ್ ನಿಯಮ 1993 ರ ರಿತ್ಯಾ ಕೈಗೊಂಡಿರುವ ಕ್ರಮವನ್ನು ಅನುಮೋದಿಸಿ ನನ್ನನ್ನು ಪ್ರಕರಣದಿಂದ ದೋಷಮುಕ್ತನನ್ನಾಗಿಸಬೇಕೆಂದು ಕೋರಿರುತ್ತಾರೆ.

ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿರುತ್ತಾರೆ ಮತ್ತು ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪಲೋಕಾಯುಕ್ತರು ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ರವರಿಗೆ **"ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಐದು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಹಿಡಿಯುವಂತೆ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ ಎಲ್ಲಾ ಅಂಶಗಳನ್ನು ಹಿನ್ನೆಲೆಯಲ್ಲಿ ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ನಿರ್ಣಯಿಸಿದೆ. ಆದುದರಿಂದ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಐದು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಹಿಡಿಯುವಂತೆ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 20 ಗ್ರಾಪಂಕಾ 2016 ಬೆಂಗಳೂರು, ದಿನಾಂಕ-2-11-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಎಂ.ಬಸವಯ್ಯ ಮತ್ತು ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ ಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ **"ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಐದು ವರ್ಷಗಳ ಅವಧಿಗೆ ಸಂಚಿತ ರಹಿತ ಪರಿಣಾಮದೊಂದಿಗೆ ತಡೆಹಿಡಿಯುವಂತೆ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ
6. ಶ್ರೀ ಎಂ.ಬಸವಯ್ಯ ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ
7. ಶ್ರೀ ಹೆಚ್.ಬಿ.ನಾಗರಾಜು ಹಿಂದಿನ ಕಾರ್ಯದರ್ಶಿಗಳು, ಟಿ.ದೊಡ್ಡಾಪುರ ಗ್ರಾಮ ಪಂಚಾಯಿತಿ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.